ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

---

ದಿನಾಂಕ : 09/12/2022

ಸಂ: ಸ.ಅ/ವಾ-161/2022-23

# ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :09-12-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :09-12-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಕೀರ್ತಿ.ಹೆಚ್.ಆರ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾದ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಹೊಸಕೆರೆಹಳ್ಳಿ ವಾರ್ಡ್‌ನಲ್ಲಿ ಬೆಂಗಳೂರು ಜಲಮಂಡಳಿ ವತಿಯಿಂದ ರಸ್ತೆಗಳನ್ನು ಅಗೆಯುತ್ತಿದ್ದು, ಅಗೆದಿರುವ ರಸ್ತೆಗಳನ್ನು ಸರಿಯಾದ ರೀತಿಯಲ್ಲಿ ಯಥಾಸ್ಥಿತಿ ತರದೇ ಇರುವುದನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳ ಗಮನಕ್ಕೆ ಕಾರ್ಯಪಾಲಕ ಅಭಿಯಂತರರು ತಂದಾಗ, ಮಾನ್ಯ ಅಧ್ಯಕ್ಷರು ಇಂತಹ ಘಟನೆ ಮರುಕಳಿಸಿದರೆ ದಂಡವನ್ನು ವಿಧಿಸುವುದಾಗಿ ಸಭೆಯಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.

2) ಹೊಸಕೆರೆಹಳ್ಳಿ ವಾರ್ಡ್‌ನಲ್ಲಿ ಪಾದಚಾರಿ ಮಾರ್ಗವನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದಾಗ ಮುಂದಿನ ಸಭೆಯೊಳಗೆ ತೆರವುಗೊಳಿಸುವುದಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವುದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿದರು.

3) ಹೊಸಕೆರೆಹಳ್ಳಿ ಕೆರೆ ಅಜುಬಾಜು ಪ್ರದೇಶದಲ್ಲಿ ಸೊಳ್ಳೆಗಳು ಹೆಚ್ಚಾಗಿದ್ದು, ಅವುಗಳನ್ನು ನಿಯಂತ್ರಿಸುವಂತೆ ಸಾರ್ವಜನಿಕರು ಸಭೆಗೆ ಕೋರಿದಾಗ ಸಭೆಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರವರು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

4) ವಾರ್ಡ್ ಸಂಖ್ಯೆ-161 ರ ಹೊಸಕೆರೆಹಳ್ಳಿ ಬಸ್ ನಿಲ್ದಾಣದ ಹತ್ತಿರ ಬೀದಿದೀಪಗಳು ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವುದಿಲ್ಲವೆಂದು ಸಾರ್ವಜನಿಕರು ಕೋರಿದ್ದಾಗ ಸಭೆಯಲ್ಲಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ನೋಡೆಲ್ ಅಧಿಕಾರಿಯವರು ತಿಳಿಸಿರುತ್ತಾರೆ.

5) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ದೊಡ್ಡ ವಿದ್ಯುತ್ ತಂತಿ ಹಾದು ಹೋಗಿದ್ದು, ಅವುಗಳನ್ನು ಹೆಚ್.ಡಿ.ಡಿ ಕೇಬಲ್ ಮುಖಾಂತರ ಅಳವಡಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ಸಾರ್ವಜನಿಕರು ಕೋರಿದಾಗ ಮಾನ್ಯ ಅಧ್ಯಕ್ಷರು ಸಂಬಂಧಪಟ್ಟ ಅಧಿಕಾರಿಗಳಿಗೆ ಚರ್ಚಿಸುವುದಾಗಿ ಸಭೆಗೆ ತಿಳಿಸಿದರು.

6) ಡಾ//ರಾಜಕುಮಾರ್ ಪುತ್ಥಳಿ ಹತ್ತಿರ ಹೈ ಮಾಸ್ ಬೀದಿ ದೀಪಗಳನ್ನು ಅಳವಡಿಸುವಂತೆ ಸಾರ್ವಜನಿಕರು ಕೋರಿದಾಗ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Keerthi H.R.
ವಾರ್ಡ್ ಸಮಿತಿ ಸಂಚಾಲಕರು

S.m. [signature]
ವಾರ್ಡ್ 161 ರ ನೋಡಲ್ ಅಧಿಕಾರಿ. 03/12/2024